# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ 2012-13 ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಕಾರ್ಯಕ್ರಮದಡಿ ರಾಜ್ಯ ಸಹಾಯಧನ ಬಿಡುಗಡೆ ಕುರಿತು.

**ಪ್ರಸ್ತಾವನೆ :**

2012-13ನೇ ಸಾಲಿನ ರಾಜ್ಯ ಆಯವ್ಯಯದಡಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಕಾರ್ಯಕ್ರಮದಡಿ ಕೇಂದ್ರ ಹಾಗೂ ರಾಜ್ಯದ ಪಾಲಾಗಿ ₹ 1495.20ಲಕ್ಷಗಳನ್ನು ನಿಗದಿಪಡಿಸಿದ್ದು, ಈಗಾಗಲೇ ₹ 1134.09 ಲಕ್ಷಗಳನ್ನು ಬಿಡುಗಡೆ ಮಾಡಿದ್ದು, ಇನ್ನುಳಿದ ₹ 361.11 ಲಕ್ಷಗಳಲ್ಲಿ ₹ 27.10 ಲಕ್ಷಗಳನ್ನು ಕಾರ್ಯಕ್ರಮದ ಹಿತದೃಷ್ಟಿಯಿಂದ ಪ್ರಗತಿ ಸಾಧಿಸದೇ ಇರುವ ಬಳ್ಳಾರಿ ಜಿಲ್ಲಾ ಪಂಚಾಯತ್‌ರಡಿ ಲಭ್ಯವಿರುವ ಅನುದಾನದಲ್ಲಿ ಅವಶ್ಯಕ ಅನುದಾನವನ್ನು ಮಾತ್ರ ಹಿಂಪಡೆದು, ಪ್ರಗತಿ ಸಾಧಿಸಿದ ಶಿವಮೊಗ್ಗ ರಾಮನಗರ, ಮತ್ತು ಉಡುಪಿ ಜಿಲ್ಲಾ ಪಂಚಾಯತ್‌ಗಳಿಗೆ ಮರು ಹೊಂದಾಣಿಕೆ ಮೂಲಕ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ 46 ಜೈಅಯೋ 2012 ಬೆಂಗಳೂರು, ದಿನಾಂಕ 27.03.2013**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, 2012-13ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ 2810-60-196-6-01(ಯೋಜನೆ)ರಡಿ ಬಳ್ಳಾರಿ ಜಿಲ್ಲಾ ಪಂಚಾಯಿತಿಯಲ್ಲಿ ಉಳಿಕೆಯಾಗುವ ಅನುದಾನದಿಂದ ₹ 27.10 ಲಕ್ಷಗಳನ್ನು (ರೂ. ಇಪ್ಪತ್ತೇಳು ಲಕ್ಷದ ಹತ್ತು ಸಾವಿರಗಳು ಮಾತ್ರ) ಶಿವಮೊಗ್ಗ, ರಾಮನಗರ ಮತ್ತು ಉಡುಪಿ ಜಿಲ್ಲಾ ಪಂಚಾಯತ್‌ಗಳಿಗೆ ಪುನರ್ವಿನಿಯೋಗದ ಮೂಲಕ ಭರಿಸಲು ಮಂಜೂರಾತಿ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 11 ಟಿಎಫ್‌ಪಿ 2007 ದಿನಾಂಕ 27.11.2007 ರನ್ವಯ ಆಡಳಿತಾತ್ಮಕ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಿಗೆ ಪ್ರದತ್ತವಾದ ಅಧಿಕಾರದನ್ವಯ ಹಾಗೂ ಇಲಾಖಾ ಅಂತರಿಕ ಆರ್ಥಿಕ ಸಲಹೆಗಾರರ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಗ್ರಾಅಪ 152 ಪಿಬಿಎಸ್ 2013 ದಿನಾಂಕ 25.02.2013 ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ
(ಎ.ದೀಪಾ) 28/3/13
ನಿರ್ದೇಶಕರು(ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ , ಬೆಂಗಳೂರು
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಳ್ಳಾರಿ, ಶಿವಮೊಗ್ಗ, ರಾಮನಗರ, ಮತ್ತು ಉಡುಪಿ
3. ಉಪಕಾರ್ಯದರ್ಶಿ(ಅಭಿವೃದ್ಧಿ)/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬಳ್ಳಾರಿ, ಶಿವಮೊಗ್ಗ, ರಾಮನಗರ, ಮತ್ತು ಉಡುಪಿ
4. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು
5. ಜಿಲ್ಲಾ ಖಜಾನಾಧಿಕಾರಿಗಳು, ಬಳ್ಳಾರಿ, ಶಿವಮೊಗ್ಗ, ರಾಮನಗರ, ಮತ್ತು ಉಡುಪಿ
6. ಇಲಾಖಾ ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ
7. ಖಜಾನೆಗಳ ಉಪನಿರ್ದೇಶಕರು, ಫೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಟವರ್, ಬೆಂಗಳೂರು
8. ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ:49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜಭವನ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ
10. ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿ

**ಗ್ರಾಮೀಣಾಭಿವೃದ್ಧಿ ಮತ್ತು ಪಚಾಯತ್ ರಾಜ್ ಇಲಾಖೆ ( ಬೇಡಿಕೆ ಸಖ್ಯೆ 7)**

**ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆ**

ಪ್ರಪತ್ರ 22 ಎ - KFC( ಅನುಚ್ಛೇದ 308)

ಆಯವ್ಯಯ ಪತ್ರದಲ್ಲಿ ಅಥವಾ ಹೆಚ್ಚಿನ ಹಣ ಹಚಿಕೆ (ಅಲಾಟ್ಮೆಟ್)ಗಳಲ್ಲಿ ಉಪಬಧ ಕಲ್ಪಿಸಿಲ್ಲದ ಎಲ್ಲಾ ವಿನಿಯೋಗಗಳಿಗೆ ಅಥವಾ ಮಜೂರಾತಿಗೆ ಲಗತ್ತಿಸಬೇಕಾದ ಪುನರ್ವಿನಿಯೋಗದ ವಿವರಣೆ

(ರೂ.ಲಕ್ಷಗಳಲ್ಲಿ)

| ಕ್ರ.ಸ | ಮುಗಡ ಪತ್ರದ ಪ್ರಧಾನ, ಚಿಕ್ಕ ,ಉಪ ಮತ್ತು ವಿವರವಾದ ಶೀರ್ಷಿಕೆಗಳು | ಹೆಚ್ಚಿಸಲು ಪ್ರಸ್ತಾವಿಸಲಾದ ಅದಾಜಿನ ಶೀರ್ಷಿಕೆ | | | | ಕಡಿಮೆ ಮಾಡಲು ಪ್ರಸ್ತಾವಿಸಲಾದ ಅದಾಜಿನ ಶೀರ್ಷಿಕೆ | | | | ಷರಾ ಹಣ ಹಚಿಕೆ ( ಅಲಾಟ್‌ಮೆಟ್) ಮೀರಿರುವುದಕ್ಕೆ ಮತ್ತು ಉಳಿತಾಯ ನಿರೀಕ್ಷಿಸುವುದಕ್ಕೆ ಕಾರಣಗಳನ್ನು ಇಲ್ಲಿ ಪೂರ್ಣವಾಗಿ ವಿವರಿಸಬೇಕು. |
|---|---|---|---|---|---|---|---|---|---|---|
| | | ಮಜೂರಾದ ಆಯವ್ಯಯ ಅದಾಜಿನಲ್ಲಿರುವ ಮೊತ್ತ | ಈವರೆಗೆ ಆಗಿರುವ ವಾಸ್ತವಿಕ ವೆಚ್ಚ | ವರ್ಷದ ಉಳಿದ ಅವಧಿಯಲ್ಲಿ ಸಭವನೀಯ ವೆಚ್ಚ | ಬೇಕಾದ ಹೆಚ್ಚಿನ ಅಲಾಟ್‌ಮೆಟ್ ವಿವರ ( ಶೆ.50 ರಷ್ಟು) | ಮಜೂರಾದ ಆಯವ್ಯಯ ಅದಾಜಿನಲ್ಲಿರುವ ಮೊತ್ತ | ಈವರೆಗೆ ಆಗಿರುವ ವಾಸ್ತವಿಕ ವೆಚ್ಚ | ವರ್ಷದ ಉಳಿದ ಅವಧಿಯಲ್ಲಿ ಸಭವನೀಯ ವೆಚ್ಚ | ಪುನರ್ವಿನಿಯೋಗಕ್ಕೆ ಲಭ್ಯವಿರುವ ಮೊತ್ತ | |
| | 1 | 2 | 3 | 4 | 5 | 6 | 7 | 8 | 9 | 10 |
| | 2810-60-196-6-01 ( 2810-01-101-0-00 ) | | | | | | | | | ಕೇಂದ್ರ ಪುರಸ್ಕೃತ ಕಾರ್ಯಕ್ರಮದ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ಕೆಲವು ಜಿಲ್ಲೆಗಳಿಗೆ ಹೆಚ್ಚುವರಿ ರಾಜ್ಯ ಅನುದಾನ ಅವಶ್ಯಕತೆ ಇರುತ್ತದೆ. |
| 1 | ಶಿವಮೊಗ್ಗ – 405 | 120.00 | 120.00 | 3.97 | 3.97 | | | | | |
| 2 | ರಾಮನಗರ –452 | 8.00 | 8.00 | 2.38 | 2.38 | | | | | |
| 3 | ಉಡುಪಿ – 457 | 20.00 | 20.00 | 20.75 | 20.75 | | | | | |
| | ಒಟ್ಟು | **148.00** | **148.00** | **27.10** | **27.10** | | | | | |
| 1 | ಬಳ್ಳಾರಿ –418 | | | | | 48.00 | 11.88 | 9.02 | 27.10 | ಪ್ರಸಕ್ತ ಸಾಲಿನಲ್ಲಿ ಬಳ್ಳಾರಿ ಜಿಲ್ಲಾ ಪಂಚಾಯಿತಿನಲ್ಲಿ ಬಾಕಿ ಉಳಿದಿರುವ ಅನುದಾನವನ್ನು ಅವಶ್ಯಕತೆಯಿರುವ ಜಿಲ್ಲಾ ಪಂಚಾಯಿತಿಗಳಿಗೆ ಬಿಡುಗಡೆ ಪುನರ್ವಿನಿಯೋಗದ ಮೂಲಕ ಬಿಡುಗಡೆ ಮಾಡಿದೆ |
| | ಒಟ್ಟು | | | | | **48.00** | **11.88** | **9.02** | **27.10** | |

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ